## ದಿನಾಂಕ :07-11-2020 ರಂದು ಮುಂಜಾನೆ 10.30 ಗಂಟೆಗೆ ವಾರ್ಡ್ ಸಂಖ್ಯೆ-181 ರ ವಾರ್ಡ್ ಸಮಿತಿಯ ಸಭೆಯ ನಡವಳಿಗಳು :-

### ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು ಮತ್ತು ಸಾರ್ವಜನಿಕರು

1) ಶ್ರೀ ನಾಗರಾಜ್ ನರಗೇಶ್ ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿ.

2) ಸಂತೋಷ್‌ಕುಮಾರ್, ಸಹಾಯಕ ಕಾರ್ಯ ನಿರ್ವಾಹಕ ಅಭಿಯಂತರರು (ಪರಿಸರ) ಪದ್ಮನಾಭನಗರ ಉಪ ವಿಭಾಗ

3) ಶ್ರೀ ರುದ್ರೇಶ್, ಕಂದಾಯ ಪರಿವೀಕ್ಷಕರು, ಬಿ.ಬಿ.ಎಂ.ಪಿ.

4) ಶ್ರೀ ಹೇಮಂತ್.ಆರ್, ಕಂದಾಯ ವಸೂಲಿಗಾರರು, ಬಿ.ಬಿ.ಎಂ.ಪಿ.

ವಾರ್ಡ್ ಸಮಿತಿ ಸಂಚಾಲಕರು ಮತ್ತು ಸಹಾಯಕ ಅಭಿಯಂತರರು ಕುಮಾರಸ್ವಾಮಿ ಬಡಾವಣೆ ವಾರ್ಡ್ ಸಂಖ್ಯೆ-181 ರವರಾದ ಶ್ರೀ ವೆಂಕಟಮಲವಯ್ಯ ರವರು ಪ್ರಾರಂಭದಲ್ಲಿ ಉಪಸ್ಥಿತರಿದ್ದ ನೋಡೆಲ್ ಅಧಿಕಾರಿ ಮತ್ತು ವಾರ್ಡ್ ಸಮಿತಿಯ ಅಧ್ಯಕ್ಷರು ಮತ್ತು ಉಪಸ್ಥಿತರಿದ್ದ ಎಲ್ಲಾ ಅಧಿಕಾರಿಗಳು, ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಶನ್ ಹಾಗೂ ಸಾರ್ವಜನಿಕರನ್ನು ಸ್ವಾಗತ ಕೋರಿದರು.

ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು

ನೋಡೆಲ್ ಅಧಿಕಾರಿಗಳ ಜೊತೆಯಲ್ಲಿ 3ನೇ ಸಭೆಯನ್ನು ಆಯೋಜಿಸಲಾಗಿದ್ದು, ಸಭೆಯಲ್ಲಿ ಅಧಿಕಾರಿಗಳು, ರೆಸಿಡೆನ್ಸ್ ವೆಲ್‌ಫೇರ್ ಅಸೋಸಿಯೇಶನ್ ಹಾಗೂ ಸಾರ್ವಜನಿಕರವರಿಗೆ ಪ್ರಮುಖವಾಗಿ ಕೋವಿಡ್-19 ರ ಬಗ್ಗೆ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳಿಗೆ ಹಾಗೂ ಸಾರ್ವಜನಿಕರಿಗೆ ಮೊದಲನೇ ಅಧ್ಯತೆಯನ್ನು ಕೋವಿಡ್-19 ಗೆ ಒತ್ತು ನೀಡುವಂತೆ ನೋಡೆಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

1) ವಾರ್ಡ್ ಸಂಖ್ಯೆ-181 ರ ಇಸ್ರೋ ಬಡಾವಣೆ ಬೆಸ್ಕಾಂ ಕಛೇರಿಯ ಹಿಂದೆ ಹಾಕುತ್ತಿರುವ ಕಸದ ಬಗ್ಗೆ ಚರ್ಚಿಸಿ ಸದರಿ ಸ್ಥಳದಲ್ಲಿ ಅನಧಿಕೃತವಾಗಿ ಕಸ ಹಾಕುವವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವಂತೆ ಸೂಚಿಸಲಾಯಿತು.

2) ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರ ಮತ್ತು ಸಂಘ ಸಂಸ್ಥೆಗಳೊಂದಿಗೆ ಸೇರಿ ಅಭಿಯಾನ ನಡೆಸುವ ಬಗ್ಗೆ ಚರ್ಚಿಸಲಾಯಿತು.

3) ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ 100 ಅಡಿ ವರ್ತುಲ ರಸ್ತೆಯ ಮುನಿಯಪ್ಪ ಕಾಂಪೌಂಡ್ ಬಳಿ ಸಂಗ್ರಹವಾಗಿರುವ ಕಸವನ್ನು ಘನತ್ಯಾಜ್ಯ ಇಲಾಖೆ ಮತ್ತು ಕಾಮಗಾರಿ ಇಲಾಖೆ ಒಟ್ಟಿಗೆ ಸೇರಿ (Intensive Cleaning) ಸ್ವಚ್ಛಗೊಳಿಲಾಗಿರುವುದನ್ನು ಸಭೆಯ ಗಮನಕ್ಕೆ ಸಹಾಯಕ ಅಭಿಯಂತರರು ವಾಡ್ ಸಮಿತಿ ಸಭೆಯ ಗಮನಕ್ಕೆ ತರಲಾಯಿತು.

4) ಪೈಪ್‌ಲೈನ್ ರಸ್ತೆಯಲ್ಲಿ ಸಿ.ಸಿ ಕ್ಯಾಮರಾ ಅಳವಡಿಸುವ ಬಗ್ಗೆ ಸದಸ್ಯರಿಂದ ಸೂಚಿಸಲಾಗಿರುತ್ತದೆ ಮತ್ತು ಹಾಲಿ ವಾಡ್‌ನಲ್ಲಿ ಇರುವ ಸಿ.ಸಿ ಕ್ಯಾಮರಾ.'ಳ ನಿರ್ವಹಣೆಯ ಬಗ್ಗೆ ವಿಧ್ಯುತ್ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಿ ಕೂಡಲೇ ದುರಸ್ಥಿ ಪಡಿಸುವುದಾಗಿ ಸಭೆಗೆ ತಿಳಿಸಲಾಯಿತು.

5) ತೋಟಗಾರಿಗೆ ಇಲಾಖೆಯ ಅಧಿಕಾರಿಗಳು ಮುಂದಿನ ಸಭೆಗೆ ತಪ್ಪದೇ ಹಾಜರಾಗುವಂತೆ ಸೂಚಿಸಲಾಗಿರುತ್ತದೆ.

Scanned by CamScanner

6) ವಾರ್ಡ್‌ನಲ್ಲಿ ಬಾಕಿ ಇರುವ ಕಂದಾಯವನ್ನು ವಸೂಲಿ ಮಾಡಲು ವಾರೆಂಟ್ ನೀಡುವಂತೆ ಕಂದಾಯ ಅಧಿಕಾರಿಗಳಿಗೆ ಸೂಚಿಸಲಾಯಿತು ಮತ್ತು ಡಿ.ಸಿ ಕಂದಾಯ ಅಧಿಕಾರಿಗಳೊಂದಿಗೆ ನೋಡೆಲ್ ಅಧಿಕಾರಿಗಳು ದೂರವಾಣಿ ಮುಖಾಂತರ ಚರ್ಚಿಸಲಾಗಿದ್ದು, 12 ವರ್ಷಗಳಿಂದ ಬಾಕಿ ಇರುವ 5 ವರ್ಷಗಳಿಂದ ಮೇಲ್ಪಟ್ಟು ಮತ್ತು 5 ವರ್ಷಗಳಿಂದ ಬಾಕಿ ಇರುವ ಕಂದಾಯ ಬಾಕಿದಾರರಿಂದ ಕೂಡಲೇ ಕಂದಾಯವನ್ನು ವಸೂಲು ಮಾಡಲು ಸಭೆಯಲ್ಲಿ ಕಂದಾಯ ಅಧಿಕಾರಿಗಳಿಗೆ ತಿಳಿಸಲಾಯಿತು.

ಮಾನ್ಯ ಆಯುಕ್ತರವರ ಸೂಚನೆಯಂತೆ ಪ್ರತಿ ಒಂದನೇ ಹಾಗೂ ಮೂರನೇ ಶನಿವಾರದಂದು ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲು ಹಾಗೂ ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ವಿಭಾಗದ ಅಧಿಕಾರಿಗಳು ಸಭೆಯಲ್ಲಿ ಹಾಜರಿರಲು ಕೋರುತ್ತಾ ಮತ್ತು ಮುಂದಿನ ಸಭೆಯಲ್ಲಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಶನ್ ರವರನ್ನು ಹೆಚ್ಚಿನ ಸಂಖ್ಯೆಯಲ್ಲಿ ಆಹ್ವಾನಿಸಲು ಸಂಚಾಲಕರಿಗೆ ಸೂಚಿಸಿ ಸಭೆಯಲ್ಲಿ ಯಾವುದೇ ಪ್ರಸ್ತಾವನೆ ಮಾಡದಿದ್ದ ಕಾರಣ ನೋಡಲ್ ಅಧಿಕಾರಿ/ಅಧ್ಯಕ್ಷರ ಅಪ್ಪಣೆ ಮೇರೆಗೆ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ವಾರ್ಡ್ ಸಮಿತಿ ಸಂಚಾಲಕರು

ವಾರ್ಡ್ 181 ರ ನೋಡಲ್ ಅಧಿಕಾರಿ.